Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

10.02.2026 14.30 hrs

<><*<><>*><>

<u>ಮುಖ್ಯಾಂಶಗಳು</u>

- ಇಂಧನ ಸೇರಿದಂತೆ ವಿವಿಧ ಇಲಾಖೆಯ ಸಚಿವರು, ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಮಾಲೋಚನೆ
- ಮುಖ್ಯಮಂತ್ರಿ ಜೊತೆ ಯಾವುದೇ ರಹಸ್ಯ ಮಾತುಕತೆ ನಡೆದಿಲ್ಲ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಕೆನಡಾದಲ್ಲಿ ಸಾವನ್ನಪ್ಪಿದ ಚಂದನ್ ಕುಮಾರ್ ಕುಟುಂಬಸ್ಥರಿಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಾಂತ್ವನ
- ಇಂದು ಮಾಜಿ ಮುಖ್ಯಮಂತ್ರಿ ದಿವಂಗತ ಕೆಂಗಲ್ ಹನುಮಂತಯ್ಯ ಅವರ ಜನ್ಮದಿನ
- ಬಹುಭಾಷಾ ನಟಿ ತಮನ್ನಾ ಭಾಟಿಯಾ ಇಂದಿನಿಂದ ಕೆಎಸ್‌ಡಿಎಲ್ ನೂತನ ರಾಯಭಾರಿ

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಚಿವರೊಂದಿಗೆ ೨೦೨೬-೨೭ ನೇ ಸಾಲಿನ ಬಜೆಟ್ ಪೂರ್ವ ಸಭೆ ನಡೆಸಿದರು. ಮೊದಲಿಗೆ ಅವರು, ಇಂಧನ ಇಲಾಖೆಯ ಸಭೆ ನಡೆಸಿದರು. ಈ ವೇಳೆ, ಇಂಧನ ಸಚಿವ ಕೆ.ಜೆ.ಜಾರ್ಜ್ ಉಪಸ್ಥಿತರಿದ್ದರು. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಮತ್ತು ಆರ್ಥಿಕ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದಾರೆ. ಬಳಿಕ ಅವರು, ಯೋಜನೆ, ಕಾರ್ಯಕ್ರಮ ಸಂಯೋಜನೆ, ಸಾಂಖ್ಯಿಕ, ಕಂದಾಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಯಾವುದೇ ರಹಸ್ಯ ಮಾತುಕತೆ ನಡೆದಿಲ್ಲ. ಎಲ್ಲಾ ನಿರ್ಧಾರಗಳನ್ನು ವರಿಷ್ಠರ ಸಮ್ಮುಖದಲ್ಲಿ ಕೈಗೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ದೆಹಲಿಗೆ ತೆರಳುವುದಕ್ಕೂ ಮುನ್ನ ಬೆಂಗಳೂರಿನಲ್ಲಿ ಇಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು ಪಕ್ಷದೊಳಗೆ ಅನಗತ್ಯ ಗೊಂದಲ ಸೃಷ್ಟಿಸುವ ಹೇಳಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೂಚಿಸಿದ್ದಾರೆ. ಈ ಸೂಚನೆಯನ್ನು ಪಕ್ಷದ ಎಲ್ಲರೂ ಪಾಲಿಸಬೇಕು. ಮಂತ್ರಿಗಳು, ಶಾಸಕರು ಅಥವಾ ಯಾರೇ ಆದರೂ ನೀಡುವ ಹೇಳಿಕೆಗಳು ಪಕ್ಷಕ್ಕೆ ಹಾನಿಕಾರಕವಾಗಬಾರದು, ಬದಲಿಗೆ ಪಕ್ಷಕ್ಕೆ ಒಳಿತು ಮಾಡುವಂತಿರಬೇಕು ಎಂದು ತಿಳಿಸಿದ್ದಾರೆ.

<><*<><>*><>

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದು ಕೆನಡಾದಲ್ಲಿ ಹತ್ಯೆಗೀಡಾದ ಸಾಫ್ಟ್‌ವೇರ್ ಎಂಜಿನಿಯರ್ ಚಂದನ್ ಕುಮಾರ್ ನಿವಾಸಕ್ಕೆ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು. ನೆಲಮಂಗಲ ಬಳಿಯ ತ್ಯಾಮಗೊಂಡ್ಲುವಿನಲ್ಲಿರುವ ಚಂದನ್ ನಿವಾಸಕ್ಕೆ ತೆರಳಿ, ಪೋಷಕರೊಂದಿಗೆ ಚರ್ಚೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೃತದೇಹ ಶನಿವಾರದೊಳಗೆ ಭಾರತಕ್ಕೆ ಆಗಮಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ. ಈ ನಡುವೆ ಕೇಂದ್ರ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಚಂದನ್ ಕುಮಾರ್ ಪೋಷಕರೊಂದಿಗೆ ದೂರವಾಣಿಯ ಮೂಲಕ ಮಾತನಾಡಿ ಸಂತಾಪ ಸೂಚಿಸಿದ್ದಾರೆ. ಮೃತದೇಹವನ್ನು ಭಾರತಕ್ಕೆ ತರಲು ವಿದೇಶಾಂಗ ಸಚಿವಾಲಯವು, ಎಲ್ಲಾ ವ್ಯವಸ್ಥೆಗಳನ್ನು ಮಾಡಿದ್ದು, ಕೆನಡಾದ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ ಎಂದು ಭರವಸೆ ನೀಡಿದ್ದಾರೆ.

<><*<><>*><>

ಮಾಜಿ ಮುಖ್ಯಮಂತ್ರಿ ದಿವಂಗತ ಕೆಂಗಲ್ ಹನುಮಂತಯ್ಯನವರು, ರಾಜ್ಯ ಕಂಡ ಪ್ರಾಮಾಣಿಕ ಹಾಗೂ ಧೀಮಂತ ರಾಜಕಾರಣಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕೆಂಗಲ್ ಹನುಮಂತಯ್ಯ ಅವರ ಜನ್ಮ ದಿನಾಚರಣೆ ಅಂಗವಾಗಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸುಂದರವಾದ ಹಾಗೂ ಭವ್ಯವಾದ ವಿಧಾನಸೌಧ ನಿರ್ಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಶ್ಲಾಘಿಸಿದರು. ಇದೇ ವೇಳೆ, ಅಸ್ಸಾಂನಲ್ಲಿ ನಡೆಯುವ ಸಭೆಗೆ ಹಾಜರಾಗಬೇಕಾದ ಹಿನ್ನೆಲೆಯಲ್ಲಿ ಬಜೆಟ್ ಸಿದ್ಧತೆ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗವಹಿಸುವುದಿಲ್ಲ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಪ್ರತಿಕ್ರಿಯಿಸಿ ಈ ವಿಚಾರದಲ್ಲಿ ಪಕ್ಷದ ವರಿಷ್ಠರ ತೀರ್ಮಾನವೇ ಅಂತಿಮ. ವರಿಷ್ಠರು ಬಯಸಿದರೆ ಮಾತ್ರ ದೆಹಲಿಗೆ ತೆರಳುವುದಾಗಿ ಸ್ಪಷ್ಟಪಡಿಸಿದ್ದಾರೆ.

<><*<><>*><>

ಸರ್ಕಾರಿ ಸ್ವಾಮ್ಯದ ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್-ಕೆಎಸ್‌ಡಿಎಲ್, ಬಹುಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು ಬ್ರ್ಯಾಂಡ್ ಅಬಾಸಿಡರ್ ಆಗಿ ನೇಮಿಸಿಕೊಂಡಿದೆ. ಇವರ ಎರಡು ವರ್ಷಗಳ ಅವಧಿ ಇಂದಿನಿಂದ ಆರಂಭವಾಗಲಿದ್ದು, ಮುಂದಿನ ೨೦೩೦ರ ವೇಳೆಗೆ ಐದು ಸಾವಿರ ಕೋಟಿ ರೂಪಾಯಿ ವಹಿವಾಟು ನಡೆಸುವ ಗುರಿ ಹೊಂದಲಾಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಮೂರು ಮಿಲಿಯನ್‌ಗಿಂತಲೂ ಅಧಿಕ ಫಾಲೋವರ್ಸ್ ಹೊಂದಿರುವ ಹಿನ್ನೆಲೆಯಲ್ಲಿ ನಟಿ ತಮನ್ನಾ ಭಾಟಿಯಾ ಅವರನ್ನು ಈ ಕಾರ್ಯತಂತ್ರದ ಭಾಗವಾಗಿ ತೊಡಗಿಸಿಕೊಳ್ಳಲಾಗಿದೆ.

ಪ್ರಸ್ತುತ ಈ ಸಂಸ್ಥೆಯು, ಮೈಸೂರು ಸ್ಯಾಂಡಲ್ ಸೋಪ್‌ನಿಂದ ಹಿಡಿದು, ಕುಡಿಯುವ ನೀರಿನವರಗೆ ಒಟ್ಟು ೫೭ ಪ್ರೀಮಿಯಂ ಉತ್ಪನ್ನಗಳನ್ನು ತಯಾರಿಸುತ್ತಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ನಡೆಸಿದ ೨೦೨೬ರ ಪರೀಕ್ಷಾ ಪೇ ಚರ್ಚೆಯಲ್ಲಿ ರಾಜ್ಯದಿಂದ ಬೆಂಗಳೂರಿನ ಲಿಟಲ್ ಫ್ಲವರ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿ ಪನ್ನಗ ಭೂಷಣ ಭಾಗವಹಿಸಿದ್ದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಡೆಸಿದ ಸಂವಾದದ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಪನ್ನಗ ಭೂಷಣ, ಪ್ರಧಾನಿ ಅವರು ಪರೀಕ್ಷೆ, ಜೀವನ ಶೈಲಿ ಹಾಗೂ ವಿಕಸಿತ ಭಾರತ ಕುರಿತಂತೆ ನೀಡಿದ ಸಲಹೆಗಳು ಹಾಗೂ ಮಾರ್ಗದರ್ಶನ ಮರೆಯಲಾರದ ಅನುಭವ ಎಂದು ಹೇಳಿದ್ದಾರೆ.  ಅದರಲ್ಲೂ  ಪರೀಕ್ಷಾ ಪೇ ಚರ್ಚೆಯಲ್ಲಿ ಕೊಳಲು ನುಡಿಸುವ ಅವಕಾಶ ಸಿಕ್ಕಿದ್ದು ಅತ್ಯಂತ ಸಂತಸದ ವಿಚಾರ ಎಂದು ತಿಳಿಸಿದ್ದಾರೆ.

ಧ್ವನಿ - ಪನ್ನಗ ಭೂಷಣ ( ೩೭  ಸೆಕೆಂಡ್ಸ್)

<><*<><>*><>

ದೇಶದಾದ್ಯಂತ ಇಂದು ರಾಷ್ಟ್ರೀಯ  ಜಂತುಹುಳು ನಿವಾರಣಾ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಮಕ್ಕಳಲ್ಲಿನ ರಕ್ತಹೀನತೆ ತಡೆಗಟ್ಟಲು ಮತ್ತು ದೈಹಿಕ, ಮಾನಸಿಕ ಬೆಳವಣಿಗೆಗೆ ಜಂತುಹುಳು ನಿವಾರಣೆ ಅತ್ಯಗತ್ಯ ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಮಕ್ಕಳ ಆರೋಗ್ಯ ರಕ್ಷಣೆ ಮತ್ತು ಪೌಷ್ಟಿಕಾಂಶ ವೃದ್ಧಿಯ ಉದ್ದೇಶದಿಂದ ಹಮ್ಮಿಕೊಳ್ಳಲಾದ ೨೦೨೫-೨೬ನೇ ಸಾಲಿನ ರಾಷ್ಟ್ರೀಯ ಜಂತುಹುಳು ನಿವಾರಣಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯ ಪ್ರತಿಯೊಬ್ಬ ಮಗುವೂ ಈ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ಹೇಳಿದ್ದಾರೆ. 'ಜಂತುಹುಳು ಮುಕ್ತ ಮಕ್ಕಳು, ಉಜ್ವಲ ಭವಿ?ಗಳು' ಧ್ಯೇಯದೊಂದಿಗೆ, ಇಂದು, ಹಾವೇರಿ ಜಿಲ್ಲೆಯಾದ್ಯಂತ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಆಯೋಜಿಸಲಾಗಿದೆ.

<><*<><>*><>

ಬಾಲಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ಹಲವು ಕಾಯ್ದೆ ಕಾನೂನು ಜಾರಿಗೊಳಿಸಲಾಗಿದೆ. ವಿಜಯನಗರ ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತ ಜಿಲ್ಲೆಯಾಗಿಸಲು ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ  ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ ಸೂಚಿಸಿದ್ದಾರೆ. ಆಧುನಿಕ ಸಮಾಜದಲ್ಲಿ ಜೀತ ಪದ್ಧತಿಯು ಒಂದು ಶಾಪವಾಗಿ ಪರಿಣಮಿಸಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಕ್ರಿಯಾಶೀಲವಾಗಿ ಕಾರ್ಯಪ್ರವೃತ್ತರಾಗಬೇಕಿದೆ. ಇದು ಕೇವಲ ಕಾರ್ಮಿಕ ಇಲಾಖೆ ಅಥವಾ ಯಾವುದೋ ಒಂದು ಇಲಾಖೆಯ ಕಾರ್ಯವಲ್ಲ. ಪ್ರತಿಯೊಂದು ಇಲಾಖೆ ಅಧಿಕಾರಿಗಳು ಸೇರಿ ತಂಡವಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

<><*<><>*><>

ದಾವಣಗೆರೆ ಮೂಲದ ಬೆಂಗಳೂರಿನ ’ಐಡಾ ಲವ್ಲೇಸ್’ ಸಂಸ್ಥೆಯ ನಿರ್ದೇಶಕ ಡಾ. ರಾಕೇಶ್ ಎಲ್. ಸ್ವಿಟ್ಜರ್ಲೆಂಡ್‌ನ ಜಿನೀವಾದಲ್ಲಿರುವ ವಿಶ್ವ ಆರೋಗ್ಯ ಸಂಸ್ಥೆಯ ಪ್ರಾದೇಶಿಕ ಕಚೇರಿಗಳ ಪ್ರತಿಷ್ಠಿತ ಕಾರ್ಯನಿರತ ಗುಂಪಿನ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಈ ವಿಶೇಷ ಕಾರ್ಯನಿರತ ಗುಂಪಿನಲ್ಲಿ ವಿಶ್ವದಾದ್ಯಂತ ಒಟ್ಟು ೨೩ ಜಾಗತಿಕ ತಜ್ಞರನ್ನು ನೇಮಕ ಮಾಡಲಾಗಿದೆ. ಇವರಲ್ಲಿ ಭಾರತದಿಂದ ಆಯ್ಕೆಯಾದ ಏಕೈಕ ಪ್ರತಿನಿಧಿ ಎಂಬ ಹೆಗ್ಗಳಿಕೆಗೆ ಡಾ.ಎಲ್. ರಾಕೇಶ್ ಪಾತ್ರರಾಗಿದ್ದಾರೆ. ತಮ್ಮ ಹೊಸ ಜವಾಬ್ದಾರಿಯಲ್ಲಿ ಅವರು ವಿಶ್ವದ ೧೯೪ ಸದಸ್ಯ ರಾಷ್ಟ್ರಗಳು ಮತ್ತು ವಿಶ್ವ ಆರೋಗ್ಯ ಸಂಸ್ಥೆಯ ೬ ಪ್ರಾದೇಶಿಕ ಕಚೇರಿಗಳ ವ್ಯಾಪ್ತಿಯಲ್ಲಿ ಆರೋಗ್ಯ ಉಪಕ್ರಮಗಳು ಹಾಗೂ ಪ್ರಾದೇಶಿಕ ಮಟ್ಟದ ತೊಡಗಿಸಿಕೊಳ್ಳುವಿಕೆಗಳ ಕುರಿತು ಕಾರ್ಯನಿರ್ವಹಿಸಲಿದ್ದಾರೆ. ’ಐಡಾ ಲವ್ಲೇಸ್’ ಸಂಸ್ಥೆಯು ಮುಖ್ಯವಾಗಿ ಕೃತಕ ಬುದ್ಧಿಮತ್ತೆ  ಮತ್ತು ಸಹಾಯಕ ತಂತ್ರಜ್ಞಾನದ  ಮೂಲಕ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಶ್ರಮಿಸುತ್ತಿದೆ.

<><*<><>*><>

ಬುಡಕಟ್ಟು ಸಮುದಾಯಗಳು ಮತ್ತು ಅರಣ್ಯ ನಿವಾಸಿಗಳ ಹಕ್ಕುಗಳ ರಕ್ಷಣೆಗೆ ಕಂದಾಯ ಇಲಾಖೆ, ಅರಣ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಜಯಲಕ್ಷ್ಮಿ ರಾಯಕೋಡ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಆಯೋಜಿಸಲಾಗಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಇಲಾಖೆಗಳ ಸಮನ್ವಯದ ಕೊರತೆಯಿಂದ ಬಹಳಷ್ಟು ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಇವೆ ಎಂದು ಹೇಳಿದ್ದಾರೆ. ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಹೆಚ್ಚು ಅರಣ್ಯ ಪ್ರದೇಶಗಳಿದ್ದು, ಇಲ್ಲಿ ವಾಸಿಸುವ ಪರಿಶಿಷ್ಟ ಪಂಗಡಗಳು ಮತ್ತು ಇತರ ಸಾಂಪ್ರದಾಯಿಕ ಅರಣ್ಯ ನಿವಾಸಿಗಳ ಸಮಸ್ಯೆಗಳನ್ನು ಪರಿಹರಿಸಲು  ಅರಣ್ಯ ಹಕ್ಕು ಕಾಯ್ದೆಯ ಬಗ್ಗೆ ಸ್ಪಷ್ಟ ಮಾಹಿತಿ ತಿಳಿದುಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು<>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ<>*><>